**1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು.**

**ಸಿಸಿ ಸಂಖ್ಯೆ ಃ 857/2024**

ಪಿರ್ಯಾದುದಾರರು ಃ ಬಿಳಿಗೆರೆ ಪೊಲೀಸ್ ಠಾಣೆ, ನಂಜನಗೂಡು

ವಿರುದ್ದ

ಆರೋಪಿಗಳುಃ

| |
|---|
| ಯೋಗೇಶ್ ಮೂರ್ತಿ , ಬಿನ್ ಲೇಟ್ ಮುದ್ದು ಮಾರಯ್ಯ, 45 ವರ್ಷ<br>ವಾಸಃ ಸಂಃ110, 2 ನೇ ಕ್ರಾಸ್, 2 ನೇ ಹಂತ, ಮೈಸೂರು ಸಿಟಿ |

*** *** ***

ಆಪಾದನೆ

ಶ್ರೀಮತಿ.ಸರಿತ ಕುಮಾರಿ.ಎ.ಎಂ, ಬಿ.ಎ.,ಎಲ್.ಎಲ್.ಬಿ., *1*ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಆರೋಪಿತರಾದ ನಿಮ್ಮ ಮೇಲೆ ಆಪಾದಿಸುವುದೇನೆಂದರೆ**:-**

ದಿನಾಂಕಃ12.02.2024 ರಂದು ಮಧ್ಯಾಹ್ನ 02.30 ಗಂಟೆ ಸಮಯದಲ್ಲಿ ನಂಜನಗೂಡು ತಾಲ್ಲೂಕು ಬಿಳಿಗೆರೆ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ಸುತ್ತೂರು ಗ್ರಾಮದ ಬಳಿ ಸುತ್ತೂರು-ಬಿಳಿಗೆರೆ ರಸ್ತೆಯ ಜೆ ಎಸ್ ಎಸ್ ವಸತಿ ನಿಲಯದ ಬಳಿ ಚಾಸಾ.2 ರವರು ಕೆ ಎಸ್ ಆರ್ ಟಿ ಸಿ ಬಸ್ ಸಂಃಕೆಎ-42-ಎಫ್-1986 ರಲ್ಲಿ ಸುತ್ತೂರು ಗ್ರಾಮದಿಂದ ಬಿಳುಗಲಿ ಗ್ರಾಮಕ್ಕೆ ನಿಂತುಕೊಂಡು ಪ್ರಯಾಣಿಸುತ್ತಿದ್ದಾಗ ಆರೋಪಿತರಾದ ನೀವು ಕೆಎ-42-ಎಫ್-1986 ಬಸ್ಸನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಮಾನವನ ಪ್ರಾಣಕ್ಕೆ ಅಪಾಯವಾಗುವ ರೀತಿಯಲ್ಲಿ ಚಾಲನೆ ಮಾಡಿರುತ್ತೀರಿ. ಆದ್ದರಿಂದ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ.279 ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಕೊನೆಯದಾಗಿ, ಅದೇ ದಿನ, ಸಮಯ ಹಾಗೂ ಸ್ಥಳದಲ್ಲಿ ಆರೋಪಿತರಾದ ನೀವು ಮಾಡಿದ ಸದರಿ ಅಪಘಾತದಿಂದ ಚಾಸಾ.2 ರವರು ಬಸ್ಸಿನ ಒಳಗೆ ಕುಸಿದ್ದು ಬಿದ್ದು ಚಾಸಾ.2 ರವರ ಬಲಭಾಗದ ನಡುವಿನ ಮೂಳೆ ಊದಿಕೊಂಡು ತಿರುಚಿ ತೀವ್ರ ಸ್ವರೂಪದ ಗಾಯಗಳಾಗಿರುತ್ತವೆ. ಆದ್ದರಿಂದ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ.338 ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

1. **ಈಗ ನಿಮಗೆ ಓದಿ ಹೇಳಿದ ನಿಮ್ಮ ಮೇಲಿನ ಆರೋಪ ನಿಮಗೆ ತಿಳಿಯಿತೇ?**
   ಉಃ

2. **ನಿಮ್ಮ ಮೇಲಿರುವ ಆರೋಪವನ್ನು ಒಪ್ಪಿಕೊಳ್ಳುವಿರಾ? ಅಥವಾ ನಿಮ್ಮ ಪರವಾಗಿ ವಿಚಾರಣೆ ನಡೆಸಲು ಬಯಸುವಿರಾ?**
   ಉಃ

(ಮೇಲ್ಕಂಡ ಆರೋಪವನ್ನು ಆರೋಪಿಗೆ ಓದಿ ಹೇಳಿ ಕೇಳಲಾಯಿತು. ಆರೋಪಿ ಕೊಟ್ಟ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನು ಒಳಗೊಂಡಿದೆ ಎಂದು ದಿನಾಂಕ 08.07.2025 ರಂದು ತೆಗೆದ ನ್ಯಾಯಾಲಯದಲ್ಲಿ ದೃಢೀಕರಿಸಿರುತ್ತೇನೆ.)

**1ನೇ ಹೆಚ್ಚುವರಿ** ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ.,
ನಂಜನಗೂಡು.